# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 432(380)
ಮಾನ್ಯ ಸದಸ್ಯರ ಹೆಸರು : ಶ್ರೀ ವೈ ಎಂ ಸತೀಶ್
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 19.02.2024
ಉತ್ತರಿಸಬೇಕಾಗಿರುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಜಿಲ್ಲಾಸ್ಪತ್ರೆಗಳು/ತಾಲ್ಲೂಕು ಆಸ್ಪತ್ರೆಗಳಲ್ಲಿ ನರರೋಗ ತಜ್ಞರುಗಳ ಹುದ್ದೆಗಳು ಇವೆಯೇ: ಹಾಗಿದ್ದಲ್ಲಿ, ಇವುಗಳಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ತಜ್ಞರುಗಳ ಸಂಖ್ಯೆ ಎಷ್ಟು(ಜಿಲ್ಲಾವಾರು ಮಾಹಿತಿ ನೀಡುವುದು ಬಳ್ಳಾರಿ, ವಿಜಯನಗರ ಮತ್ತು ಹಾಸನ ಜಿಲ್ಲೆಗಳ ಪ್ರತ್ಯೇಕ ತಾಲ್ಲೂಕುವಾರು ವಿವರ ನೀಡುವುದು) | ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಈ ಕೆಳಕಂಡ ಆಸ್ಪತ್ರೆಗಳಲ್ಲಿ ನರರೋಗ ತಜ್ಞರ ಹುದ್ದೆಗಳು ಮಂಜೂರಾಗಿರುತ್ತವೆ. (see table below) |

| ಕ್ರ.ಸ | ಆಸ್ಪತ್ರೆ ಹೆಸರು | ಮಂಜೂರಾಗಿರುವ ಹುದ್ದೆ | ಕಾರ್ಯನಿರತ ಹುದ್ದೆ | ಖಾಲಿ ಹುದ್ದೆ |
|---|---|---|---|---|
| 1. | ಜಿಲ್ಲಾ ಆಸ್ಪತ್ರೆ ತುಮಕೂರು | 1 | 1 | 0 |
| 2. | ಜಿಲ್ಲಾ ಆಸ್ಪತ್ರೆ ಕಲಬುರಗಿ | 1 | 0 | 1 |
| 3. | ಜಿಲ್ಲಾ ಆಸ್ಪತ್ರೆ ಚಿತ್ರದುರ್ಗ | 1 | 1 | 0 |
| 4. | ಸಾರ್ವಜನಿಕ ಆಸ್ಪತ್ರೆ ಮದ್ದೂರು, ಮಂಡ್ಯ ಜಿಲ್ಲೆ | 1 | 1 | 0 |

ಜಿಲ್ಲಾ ಆಸ್ಪತ್ರೆ, ತುಮಕೂರು ಮತ್ತು ಸಾರ್ವಜನಿಕ ಆಸ್ಪತ್ರೆ ಮದ್ದೂರು, ಮಂಡ್ಯ ಜಿಲ್ಲೆ ಇಲ್ಲಿ ಒಂದು ನರ ರೋಗ ತಜ್ಞರು ಹುದ್ದೆಗಳು ಮಂಜೂರಾಗಿದ್ದು, ಈ ಹುದ್ದೆಯ ಎದುರು ಹುದ್ದೆಯಲ್ಲಿ ಶಸ್ತ್ರಚಿಕಿತ್ಸಾ ತಜ್ಞ ವೈದ್ಯರು ಕಾರ್ಯನಿರ್ವಹಿಸುತ್ತಿದ್ದಾರೆ.

ಜಿಲ್ಲಾ ಆಸ್ಪತ್ರೆ, ಚಿತ್ರದುರ್ಗ ಇಲ್ಲಿ ಒಂದು ನರರೋಗ ತಜ್ಞರ ಹುದ್ದೆ ಮಂಜೂರಾಗಿದ್ದು ಈ ಹುದ್ದೆಯ ಎದುರು ಹುದ್ದೆಯಲ್ಲಿ ಕೀಲು ಮತ್ತು ಮೂಳೆ ತಜ್ಞ ವೈದ್ಯರು ಕಾರ್ಯ ನಿರ್ವಹಿಸುತ್ತಿದ್ದಾರೆ.

ಜಿಲ್ಲಾ ಆಸ್ಪತ್ರೆ, ಕಲಬುರಗಿ ಇಲ್ಲಿನ ನರರೋಗ ತಜ್ಞರ ಹುದ್ದೆ ಖಾಲಿಯಿರುತ್ತದೆ.

ಬಳ್ಳಾರಿ ವಿಜಯನಗರ ಮತ್ತು ಹಾಸನ ಜಿಲ್ಲೆಗಳಲ್ಲಿ ನರರೋಗ ತಜ್ಞರ ಹುದ್ದೆ ಮಂಜೂರಾತಿ ಇರುವುದಿಲ್ಲ.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಆ | ರಾಜ್ಯದ ಹಲವು ಜಿಲ್ಲೆಗಳಲ್ಲಿ ಈ ನರರೋಗ ತಜ್ಞರ ಹುದ್ದೆಗಳು ಖಾಲಿ ಇರಲು ಕಾರಣಗಳೇನು: ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ನಿಲುವೇನು:(ವಿವರ ನೀಡುವುದು) | ಈ ಮೇಲೆ ತಿಳಿಸಿರುವ ಜಿಲ್ಲೆಗಳಲ್ಲಿ ಹೊರತು ಪಡಿಸಿ ಇತರೆ ಯಾವುದೇ ಜಿಲ್ಲೆಗಳಲ್ಲಿ ಈ ನರರೋಗ ತಜ್ಞರುಗಳ ಹುದ್ದೆ ಮಂಜೂರಾತಿಯಾಗಿರುವುದಿಲ್ಲ. |

| | | |
|---|---|---|
| ಇ | ರಾಜ್ಯದ ಹಲವು ಭಾಗಗಳಲ್ಲಿ ತಲೆಗೆ ಗಂಭೀರ ಪೆಟ್ಟು ಬಿದ್ದ ಸಂದರ್ಭದಲ್ಲಿ ಜಿಲ್ಲಾಸ್ಪತ್ರೆಗಳಲ್ಲಿ ಸೂಕ್ತ ಚಿಕಿತ್ಸೆ ನೀಡಲು ನುರಿತ ತಜ್ಞರುಗಳ ಇಲ್ಲದೆ ನಿಮಾನ್ಸ್ ಸಂಸ್ಥೆಗೆ ಕಳುಹಿಸುತ್ತಿರುವ ಪ್ರಕರಣಗಳು ಹೆಚ್ಚಿದ್ದು ಇದನ್ನು ಕಡಿಮೆಗೊಳಿಸಿ ಜಿಲ್ಲೆಗಳಲ್ಲೇ ಹೆಚ್ಚಿನ ಚಿಕಿತ್ಸೆ ನೀಡಲು ನುರಿತ ತಜ್ಞರುಗಳು ಹಾಗೂ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕ್ರಮ ವಹಿಸುವುದೇ;(ವಿವರ ನೀಡುವುದು) | ತಲೆಗೆ ಗಂಭೀರ ಪೆಟ್ಟು ಬಿದ್ದ ಸಂಧರ್ಭದಲ್ಲಿ ಶಸ್ತ್ರಚಿಕಿತ್ಸೆ ತಜ್ಞರು ಜಿಲ್ಲಾ ಆಸ್ಪತ್ರೆಯಲ್ಲಿ ಲಭ್ಯವಿರುವ ಸಿಟಿ ಸ್ಕ್ಯಾನ್ ಪರೀಕ್ಷೆ ಮಾಡಿಸಿ ತದನಂತರ ನ್ಯೂರೋ ಸರ್ಜನ್ ಅವಶ್ಯಕತೆ ಇದ್ದಲ್ಲಿ ಮಾತ್ರ ಹೆಚ್ಚಿನ ಚಿಕಿತ್ಸೆಗೆ ನಿರ್ದೇಶಿಸುವರು ಹಾಗೂ Mild, Moderate Head Injury ಇದ್ದಲ್ಲಿ ಜಿಲ್ಲಾ ಮಟ್ಟದಲ್ಲಿ ನಿರ್ವಹಿಸುವರು.<br><br>ಈಗಾಗಲೇ The Karnataka Brian Health Initiative ರವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರದ ಸಹಯೋಗದೊಂದಿಗೆ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ (NIMHANS) ಸಂಸ್ಥೆಯಿಂದ ಟೆಲಿ ನ್ಯೂರಾಲಜಿ ಸೇವೆಯನ್ನು ಚಿಕಿತ್ಸೆಗೆ ಅಗತ್ಯವಿರುವ ರೋಗಿಗಳಿಗೆ ಈಗಾಗಲೇ ಒದಗಿಸಲಾಗುತ್ತಿದೆ.<br><br>ಇದಾಗ್ಯೂ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಐ.ಸಿ.ಯು ಗೆ ದಾಖಲಾಗುವ ರೋಗಿಗಳಿಗೆ ಸೂಕ್ತ ಚಿಕಿತ್ಸೆ ನೀಡಲು Tele-ICU Hub & Spoke ಮಾದರಿಯಲ್ಲಿ ರಾಜ್ಯದಲ್ಲಿನ 4 ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ Hub ಸೆಂಟರ್‌ಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ಯೋಜನೆಯನ್ನು ಬಲಪಡಿಸಲು ಹಾಗೂ ಯಶಸ್ವಿಗೊಳಿಸಲು ಟೆಲಿ-ಐ.ಸಿ.ಯು ಯೋಜನೆಯ Hub & Spokeನ ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ವೈದ್ಯರು ಹಾಗೂ ಶುಶ್ರೂಷಕರುಗಳಿಗೆ ನಿರ್ದಿಷ್ಟವಾಗಿ ನ್ಯೂರಾಲಜಿ ಬಗೆಗಿನ ತರಬೇತಿ ಮತ್ತು ಪ್ರಕರಣಗಳ ಚರ್ಚೆ ಕೈಗೊಳ್ಳಬೇಕಾಗಿದೆ. ಆದ್ದರಿಂದ ಟೆಲಿ-ಐಸಿಯು ಯೋಜನೆಯ Hub & Spoke ನ ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿನ ವೈದ್ಯರು ಹಾಗೂ ಶುಶ್ರೂಷಕರುಗಳಿಗೆ NIMHANS ಸಂಸ್ಥೆ ವತಿಯಿಂದ Online ತರಬೇತಿಯನ್ನು ನಡೆಸಿ ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಲಾಗುತ್ತಿದೆ. |
| ಈ | ನಿಮಾನ್ಸ್ ಆಸ್ಪತ್ರೆಯ ಸಹಯೋಗದೊಂದಿಗೆ ರಾಜ್ಯದ ಆಯ ಭಾಗಗಳಲ್ಲಿ ಉತ್ತಮ ನರರೋಗ ಆಸ್ಪತ್ರೆಯನ್ನು ಸ್ಥಾಪಿಸಲು ಸರ್ಕಾರವು ಯಾವುದಾದರೂ ಪತ್ರ ವ್ಯವಹಾರಗಳನ್ನು ನಿಮಾನ್ಸ್ ಸಂಸ್ಥೆಯೊಂದಿಗೆ ನಡೆದಿದೆಯೇ; ಮಾಹಿತಿಯೊಂದಿಗೆ ವಿವರ ನೀಡುವುದು;(ಇಲ್ಲವಾದಲ್ಲಿ , ಈಗ ಈ ಕುರಿತು ತೀರ್ಮಾನ ಕೈಗೊಳ್ಳಲು ಸರ್ಕಾರಕ್ಕೆ ಸಾಧ್ಯವಿಲ್ಲವೇ?(ವಿವರ ನೀಡುವುದು) | ರಾಜ್ಯದ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಮೆದುಳು ಆರೋಗ್ಯ ಉಪಕ್ರಮ (KaBHI) ಕಾರ್ಯಕ್ರಮದಡಿ ನರರೋಗ ಚಿಕಿತ್ಸೆಯನ್ನು ನೀಡಲು ಬ್ರೈನ್ ಹೆಲ್ತ್ ಕ್ಲಿನಿಕ್ ಸ್ಥಾಪಿಸಲು ಕ್ರಮವಹಿಸಲಾಗುತ್ತಿದೆ. |

**ಆಕುಕ 02 ಎಚ್‌ಎಸ್‌ಡಿ 2024**

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು